ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಜ್ಯದಲ್ಲಿರುವ ಅರಣ್ಯ ಭೂ ಪ್ರದೇಶವನ್ನು ಒತ್ತುವರಿ ಮಾಡಿಕೊಂಡಿರುವ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

582(746) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಹಲವು ಗ್ರಾಮಗಳಲ್ಲಿ ಮತ್ತು ನಗರ ಪ್ರದೇಶಗಳಲ್ಲಿ ಸರ್ಕಾರಿ ಅರಣ್ಯ ಭೂಮಿಯನ್ನು ಒತ್ತುವರಿ ಮಾಡಿಕೊಂಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪ್ರಕರಣಗಳ ಸಂಖ್ಯೆ ಎಷ್ಟು; ಎಷ್ಟು ಪ್ರಕರಣಗಳಲ್ಲಿ ಅತಿಕ್ರಮಿತ ಭೂ ಪ್ರದೇಶವನ್ನು ಮರಳಿ ವಶಪಡಿಸಿಕೊಳ್ಳಲಾಗಿದೆ; (ವಿವರ ನೀಡುವುದು)

(ಆ) ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ಅಂಚಿನಲ್ಲಿರುವ ನೂರಾರು ಎಕರೆ ಅರಣ್ಯ ಪ್ರದೇಶವನ್ನು ಕೆಲವು ಖಾಸಗಿ ವ್ಯಕ್ತಿಗಳು ಅತಿಕ್ರಮಿಸಿಕೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಇ) ಸರ್ಕಾರಿ ಅರಣ್ಯ ಭೂ ಪ್ರದೇಶವನ್ನು ಒತ್ತುವರಿ ಮಾಡಿದ ಪ್ರಕರಣಗಳಲ್ಲಿ ಹಲವು ಸರ್ಕಾರಿ ಅಧಿಕಾರಿಗಳ ಸಹಯೋಗವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಅಧಿಕಾರಿಗಳ ವಿರುದ್ಧ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಲು ಸರ್ಕಾರ ಚಿಂತಿಸಿದೆಯೇ? (ವಿವರ ನೀಡುವುದು)